The KSC
APEX BANK Ltd.
A Scheduled Bank
APEX

# ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ

(ಷೆಡ್ಯೂಲ್ಡ್ ಬ್ಯಾಂಕ್)

ನಂ. 1, ಉತ್ತುಂಗ, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018.

ಸಂಖ್ಯೆ: ಮುಕಾನಿ/ಸಿವಿ/ನೇಮಕಾತಿ/4404/2021-22 ದಿನಾಂಕ: 15.03.2022

## ಪ್ರಕಟಣೆ

ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು, ಇಲ್ಲಿ ಖಾಲಿಯಿರುವ ಬ್ಯಾಂಕ್ ಸಹಾಯಕರ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (Online) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಖುದ್ದಾಗಿ / ಅಂಚೆ / ಕೊರಿಯರ್ ಇತ್ಯಾದಿ ಮೂಲಕ ಕಳುಹಿಸಲು ಅವಕಾಶವಿರುವುದಿಲ್ಲ.

### ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಇತರೆ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ದೈಹಿಕ ಅಂಗವಿಕಲರು | ತೃತೀಯ ಲಿಂಗಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 07 | 11 | 09 | 04 | 01 | 02 | 02 | – | **36** |
| ಪರಿಶಿಷ್ಟ ಜಾತಿ | 03 | 03 | 02 | 01 | – | 01 | 01 | – | **11** |
| ಪರಿಶಿಷ್ಟ ಪಂಗಡ | – | 01 | 01 | – | – | – | – | – | **02** |
| ಪ್ರವರ್ಗ-1 | 01 | 01 | 01 | – | – | – | – | – | **03** |
| ಪ್ರವರ್ಗ-2ಎ | 02 | 03 | 02 | 01 | – | 01 | 01 | 01 | **11** |
| ಪ್ರವರ್ಗ-2ಬಿ | 01 | 01 | 01 | – | – | – | – | – | **03** |
| ಪ್ರವರ್ಗ-3ಎ | 01 | 01 | 01 | – | – | – | – | – | **03** |
| ಪ್ರವರ್ಗ-3ಬಿ | 01 | 01 | 01 | – | – | – | – | – | **03** |
| ಒಟ್ಟು | **16** | **22** | **18** | **06** | **01** | **04** | **04** | **01** | **72** |

### ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಒಳಪಡುವ ಜಿಲ್ಲೆಗಳ ಅಭ್ಯರ್ಥಿಗಳಿಗೆ ಮೀಸಲಾತಿ

| ಮೀಸಲಾತಿ | ಇತರೆ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ದೈಹಿಕ ಅಂಗವಿಕಲರು | ತೃತೀಯ ಲಿಂಗಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 01 | 02 | 01 | – | – | – | – | – | **04** |
| ಪರಿಶಿಷ್ಟ ಜಾತಿ | – | – | 01 | – | – | – | – | – | **01** |
| ಪರಿಶಿಷ್ಟ ಪಂಗಡ | – | – | – | – | – | – | – | – | – |
| ಪ್ರವರ್ಗ-1 | – | – | – | – | – | – | – | – | – |
| ಪ್ರವರ್ಗ-2ಎ | – | 01 | – | – | – | – | – | – | **01** |
| ಪ್ರವರ್ಗ-2ಬಿ | 01 | – | – | – | – | – | – | – | **01** |
| ಪ್ರವರ್ಗ-3ಎ | – | – | – | – | – | – | – | – | – |
| ಪ್ರವರ್ಗ-3ಬಿ | – | – | – | – | – | – | – | – | – |
| ಒಟ್ಟು | **02** | **03** | **02** | – | – | – | – | – | **07** |

**ವೇತನ ಶ್ರೇಣಿ: 28425-955-33200-1310-41060-1800-50060-2080-62540-2235-87125.**

**ವಿದ್ಯಾರ್ಹತೆ:** (1) ಅರ್ಜಿ ಸಲ್ಲಿಸಲು ಸಾಮಾನ್ಯ ಮತ್ತು ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಯಾವುದೇ ಪದವಿ ಪರೀಕ್ಷೆಯಲ್ಲಿ ಭಾಷಾ ವಿಷಯಗಳು ಸೇರಿದಂತೆ ಕ್ರೋಢೀಕೃತ ಶೇಕಡ 60 ರಷ್ಟು ಅಂಕಗಳೊಂದಿಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಮತ್ತು ಅಂಗವಿಕಲ ಅಭ್ಯರ್ಥಿಗಳು ಕನಿಷ್ಠ ಶೇಕಡ 55ರಷ್ಟು ಅಂಕಗಳೊಂದಿಗೆ ತೇರ್ಗಡೆ ಹೊಂದಿರಬೇಕು. ಅಭ್ಯರ್ಥಿಗಳು ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು; ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. (2) ಸಹಕಾರ ವಿಷಯದಲ್ಲಿ ವಿದ್ಯಾರ್ಹತೆ ಮತ್ತು ಅನುಭವವನ್ನು ಹೊಂದಿರುವವರಿಗೆ ಆಧ್ಯತೆ ನೀಡಲಾಗುವುದು.

**ಹುದ್ದೆಗಳ ಸಂಖ್ಯೆ:** ಪ್ರಸ್ತುತ ಒಟ್ಟು ಹುದ್ದೆಗಳ ಸಂಖ್ಯೆ 79 ಇರುತ್ತವೆ. ನೇಮಕಾತಿ ಸಂದರ್ಭದಲ್ಲಿ ಅವಶ್ಯಕತೆಗನುಗುಣವಾಗಿ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ/ಕಡಿಮೆ ಮಾಡುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.

**ವಯೋಮಿತಿ:** ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ 18 ವರ್ಷ ವಯಸ್ಸು ತುಂಬಿರಬೇಕು. ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ಮೀರಿರಬಾರದು.

| ವರ್ಗ | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯೋಮಿತಿ |
|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳು; | 40 ವರ್ಷಗಳು |
| ಇತರೆ ಹಿಂದುಳಿದ ಜಾತಿ / ಹಿಂದುಳಿದ ವರ್ಗಗಳ ಅಂದರೆ ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು; | 38 ವರ್ಷಗಳು |
| ಸಾಮಾನ್ಯ ವರ್ಗದ ಅಭ್ಯರ್ಥಿಗಳು; | 35 ವರ್ಷಗಳು |
| ಅಂಗವಿಕಲ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಆಯಾ ವರ್ಗ / ಪ್ರವರ್ಗಗಳನ್ವಯ 10 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿ ನಿಗದಿ ಪಡಿಸಲಾಗಿದೆ. | |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ, ಅವರು "ಸೇವೆ ಸಲ್ಲಿಸಿದ ಅವಧಿಯ" ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. | |

**ನಿಗದಿತ ಶುಲ್ಕ / ಶುಲ್ಕ ಪಾವತಿ ಮಾಡುವ ವಿಧಾನ ಮತ್ತು ವಿವರ:** ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ಪಾವತಿ ಮಾಡುವ ಕುರಿತು ಈ ಕೆಳಗಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸತಕ್ಕದ್ದು.

| ವರ್ಗ | ಅರ್ಜಿ ಶುಲ್ಕ (ತೆರಿಗೆ ಹೊರತುಪಡಿಸಿ) |
|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳು | ರೂ. 5,00/- |
| ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ಜಾತಿ/ಹಿಂದುಳಿದ ವರ್ಗಗಳ ಅಂದರೆ ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು | ರೂ. 1,000/- |

ಅಭ್ಯರ್ಥಿಗಳು ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿ ಶುಲ್ಕವನ್ನು ಆನ್‌ಲೈನ್ ಪೇಮೆಂಟ್ ಗೇಟ್‌ವೇ ಮೂಲಕ ಪಾವತಿಸುವುದು.

**ಅರ್ಜಿ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ:**

(1) ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರವೇ ಬ್ಯಾಂಕಿನ ವೆಬ್‌ಸೈಟ್ **www.karnatakaapex.com** ಮೂಲಕವೇ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಮೊದಲು ಜಾಹೀರಾತನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಳ್ಳುವುದು. ಇದಲ್ಲದೆ ಅರ್ಜಿ ಸಲ್ಲಿಸಲು ಅಗತ್ಯವಾದ ಮಾರ್ಗದರ್ಶನವನ್ನು ವೆಬ್‌ಸೈಟ್‌ನಲ್ಲಿ ತಪ್ಪದೇ ಓದಿಕೊಳ್ಳುವುದು.

(2) ದಿನಾಂಕ: **17.03.2022** ರಿಂದ **16.04.2022** ರವರೆಗೆ ವೆಬ್‌ಸೈಟ್ ತೆರೆದಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: **16.04.2022ರ ಸಾಯಂಕಾಲ 17.30 ಗಂಟೆಯೊಳಗೆ** ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ.

(3) ನಿಗದಿತ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(4) ಅಭ್ಯರ್ಥಿಗಳು ಕೇವಲ ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

(5) ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(6) ಮೀಸಲಾತಿಯನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ UPLOAD ಮಾಡಬೇಕು. ತಪ್ಪಿದ್ದಲ್ಲಿ ಅಂತಹವರ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

(7) ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ತಕ್ಷಣ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ನೀಡುವ ನೋಂದಣಿ ಸಂಖ್ಯೆ, ಅರ್ಜಿಯ ಡೌನ್‌ಲೋಡ್ ಮಾಡಿದ ಪ್ರತಿಯನ್ನು ಮುದ್ರಿಸಿಕೊಂಡು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳುವುದು ಹಾಗೂ ಪರಿಶೀಲನಾ ಸಮಯದಲ್ಲಿ ಇವುಗಳನ್ನು ಹಾಜರುಪಡಿಸುವುದು.

**ಆಯ್ಕೆ ವಿಧಾನ:** ಅಭ್ಯರ್ಥಿಗಳ ಆಯ್ಕೆಯನ್ನು ಅವರುಗಳು ಸಲ್ಲಿಸಿರುವ ಅರ್ಜಿಗಳ ಪರಿಶೀಲನೆಯ ನಂತರ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನದ ಮೂಲಕ ಮಾಡಲಾಗುವುದು. ಪದವಿ ಪರೀಕ್ಷೆಗಳಲ್ಲಿ ಒಟ್ಟು ಪಡೆದ ಅಂಕಗಳ ಶೇಕಡ ಪ್ರಮಾಣದ ಅರ್ಹತೆ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಗೆ ಈ ಕೆಳಕಂಡ ವಿಷಯಗಳ ಮೇಲೆ ಲಿಖಿತ ಪರೀಕ್ಷೆ ನಡೆಸಲಾಗುವುದು.

| ಕ್ರ.ಸಂ. | ವಿವರಗಳು | ಅಂಕಗಳು |
|---|---|---|
| 1 | ಕನ್ನಡ ಭಾಷಾ ಜ್ಞಾನ | **50** |
| 2 | ಸಾಮಾನ್ಯ ಜ್ಞಾನ | **25** |
| 3 | ಇಂಗ್ಲೀಷ್ ಭಾಷಾ ಜ್ಞಾನ | **25** |
| 4 | ಸಹಕಾರಿ ವಿಷಯಗಳಿಗೆ ಸಂಬಂಧಪಟ್ಟಂತೆ | **50** |
| 5 | ಭಾರತದ ಸಂವಿಧಾನ | **25** |
| 6 | ಬ್ಯಾಂಕಿಂಗ್ ಕ್ಷೇತ್ರದ ಬಗ್ಗೆ. | **25** |
| | **ಒಟ್ಟು** | **200** |

ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:5 ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85ಕ್ಕೆ ಲೆಕ್ಕಾಚಾರ ಮಾಡಲಾಗುವುದು ಹಾಗೂ ಮೌಖಿಕ ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿ ಪಡಿಸಿದೆ.

ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನ ಕುರಿತು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. (Website: www.karnatakaapex.com) ಹಾಗೂ ಲಿಖಿತ ಪರೀಕ್ಷೆ ಮತ್ತು ಸಂದರ್ಶನಕ್ಕೆ ಹಾಜರಾಗಲು ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಬ್ಯಾಂಕಿನ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಬ್ಯಾಂಕಿನ ವೆಬ್‌ಸೈಟ್ ನಲ್ಲಿ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು.

### ಸಾಮಾನ್ಯ ಸೂಚನೆಗಳು

- ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವಂತೆ ಎಲ್ಲಾ ಮೂಲ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗಲು ಬ್ಯಾಂಕು ಸೂಚಿಸಿದಾಗ ಇವುಗಳೊಂದಿಗೆ ತಪ್ಪದೇ ಹಾಜರಾಗಬೇಕು.
- ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದ ಪದವಿಯ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಸ್ವಯಂ ದೃಢೀಕೃತ ಅಂಕಪಟ್ಟಿಗಳು.
- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ- ನಮೂನೆ-ಡಿ.
- ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ- ನಮೂನೆ ಇ
- ಪ್ರವರ್ಗ-2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ – ನಮೂನೆ ಎಫ್.
- ದೈಹಿಕ ಅಂಗವಿಕಲರು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಗ್ರಾಮೀಣ ಕೋಟಾ ಅಡಿಯಲ್ಲಿ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಗೆ ಸೇರಿದ ಅಭ್ಯರ್ಥಿಗಳು ಕೆನೆಪದರಕ್ಕೆ (Creamy layer) ತಾವು ಸೇರಿಲ್ಲದಿರುವ ಬಗ್ಗೆ ಘೋಷಣೆ – ನಮೂನೆ ಸಂಖ್ಯೆ – 1.
- ಗ್ರಾಮೀಣ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ –ನಮೂನೆ ಸಂಖ್ಯೆ-2.
- ವಿವಿಧ ಯೋಜನೆಗಳಡಿಯಲ್ಲಿ ನಿರಾಶ್ರಿತರ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- **ಕನ್ನಡ ಮಾಧ್ಯಮದ ಅಭ್ಯರ್ಥಿಗಳು:** ಶಾಲೆಯಲ್ಲಿ 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಓದಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಮೊಹರು ಸಹಿತ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮತ್ತು ಮೊಹರಿನೊಂದಿಗೆ ಪಡೆದಿರುವ ಪ್ರಮಾಣ ಪತ್ರ.
- ಮಾಜಿ ಸೈನಿಕರು ಸೇವೆಯಿಂದ ಬಿಡುಗಡೆಗೊಂಡ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡುವ ಬಿಡುಗಡೆ ಪತ್ರ.
- ತೃತೀಯ ಲಿಂಗ ಅಭ್ಯರ್ಥಿಗಳು: ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧಿಸೂಚನೆಯನ್ವಯ, ಕೇಂದ್ರ ಸರ್ಕಾರವು ಹೊರಡಿಸಿರುವ ತೃತೀಯ ಲಿಂಗ ವ್ಯಕ್ತಿಗಳ (ರಕ್ಷಣಾ ಹಕ್ಕುಗಳು) ನಿಯಮಗಳು 2020ರನ್ವಯ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದು ಸಲ್ಲಿಸತಕ್ಕದ್ದು.
- ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಬರುವ ಜಿಲ್ಲೆಯ ಅಭ್ಯಥಿಗಳು ಮೀಸಲಾತಿ ಕುರಿತು ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗಳಿಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ – ಅನುಬಂಧ-ಎ.
- ಅಭ್ಯರ್ಥಿಗಳು ಇಬ್ಬರು ಸ್ಥಳೀಯ ಗಣ್ಯವ್ಯಕ್ತಿಗಳಿಂದ ಗುಣ ನಡೆತೆಯ ಬಗ್ಗೆ ಪಡೆದ ಪ್ರಮಾಣ ಪತ್ರ.
- ಲಿಖಿತ ಪರೀಕ್ಷೆ / ಸಂದರ್ಶನಕ್ಕೆ ಕರೆಯಲ್ಪಟ್ಟ ಅಭ್ಯರ್ಥಿಗಳು ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗಬೇಕು. ಯಾವುದೇ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣ ನೀಡದೇ ರದ್ದುಗೊಳಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ. ಆ ರೀತಿ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸಿದ ಸಂದರ್ಭದಲ್ಲಿ ಮಾತ್ರ ಅರ್ಜಿದಾರರು ಪಾವತಿಸಿದ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದು.
- ಅಭ್ಯರ್ಥಿಗಳು ಬ್ಯಾಂಕಿನ ವೆಬ್‌ಸೈಟ್ www.karnatakaapex.com ನಲ್ಲಿ ಆಗಿಂದಾಗ್ಗೆ ನೀಡುವ ಸೂಚನೆಗಳನ್ನು ಗಮನಿಸತಕ್ಕದ್ದು.

**ಸಹಿ/- ಮುಖ್ಯ ಕಾರ್ಯನಿರ್ವಹಣಾಧಿಕಾರಿ**
**ಮತ್ತು**
**ಸದಸ್ಯ ಕಾರ್ಯದರ್ಶಿ – ನೇಮಕಾತಿ**